ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 : ದಿನಾಂಕ : 05–09–2018

# ಪತ್ರಿಕಾ ಆಮಂತ್ರಣ

1. ಕರ್ನಾಟಕ ಮೃಗಾಲಯ ಪ್ರಾಧಿಕಾರ

ವೆಬ್‌ಸೈಟ್ ಉದ್ಘಾಟನೆ:

ಆರ್. ಶಂಕರ್,
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ದಿನಾಂಕ: 06–09–2018, ಗುರುವಾರ, ಸಮಯ: ಅಪರಾಹ್ನ 12–00 ಗಂಟೆಗೆ
ಸ್ಥಳ: ಕೊಠಡಿ ಸಂಖ್ಯೆ 419, ವಿಕಾಸ ಸೌಧ, ಬೆಂಗಳೂರು

ಸಂಖ್ಯೆ: 952/1052

## ಪತ್ರಿಕಾ ಪ್ರಕಟಣೆ

## ರಾಜ್ಯದಲ್ಲಿ ಅಂತಾರಾಷ್ಟ್ರೀಯ ಮಟ್ಟದ ವಿಶ್ವವಿದ್ಯಾನಿಲಯದ ಸ್ಥಾಪನೆ ಕನಸು
## –ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ

ಬೆಂಗಳೂರು, ಸೆಪ್ಟೆಂಬರ್ 5, (ಕರ್ನಾಟಕ ವಾರ್ತೆ) :

ರಾಜ್ಯದಲ್ಲಿ ಅಂತರ್‌ರಾಷ್ಟ್ರೀಯಮಟ್ಟದ ವಿಶ್ವವಿದ್ಯಾನಿಲಯವನ್ನು ಸ್ಥಾಪಿಸುವ ಕನಸು ತಮಗಿದ್ದು ಶೀಘ್ರದಲ್ಲಿ ಈ ಕುರಿತು ಯೋಜಿಸಲಾಗುವುದು ಎಂದು ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ತಿಳಿಸಿದರು.

ಇಂದು ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯದ ಸ್ನಾತಕೋತ್ತರ ಕಲಾ ವಿಭಾಗದ ನೂತನ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದ ಅವರು ಶಿಕ್ಷಣದಿಂದ ಮಾತ್ರ ಸಮಾಜದಲ್ಲಿ ಬದಲಾವಣೆ ಸಾಧ್ಯ. ಉತ್ತಮ ಶಿಕ್ಷಣ ನೀಡಲು ಅಗತ್ಯವಿರುವ ಅಂಶಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು ರಾಜ್ಯದಲ್ಲಿ ಅಂತರ್‌ರಾಷ್ಟ್ರೀಯ ಮಟ್ಟದ ವಿಶ್ವವಿದ್ಯಾನಿಲಯವೊಂದನ್ನು ಸ್ಥಾಪಿಸುವ ತಮ್ಮ ಕನಸಿಗೆ ರೂಪ ನೀಡಲು ಶೀಘ್ರದಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದರು.

ವಿಶ್ವವಿದ್ಯಾನಿಲಯಗಳ ಕುಲಪತಿಗಳ ಆಯ್ಕೆ ಆಯಾ ವಿಶ್ವವಿದ್ಯಾನಿಲಯಗಳ ಅಭಿವೃದ್ಧಿಯನ್ನು ಹಾಗೂ ಗುಣಮಟ್ಟವನ್ನು ನಿರ್ಧರಿಸುತ್ತದೆ. ಹಾಗಾಗಿ ವಿಶ್ವವಿದ್ಯಾನಿಲಯಗಳಿಗೆ ಕುಲಪತಿಗಳನ್ನು ಹಾಗೂ ಸಿಂಡಿಕೇಟ್ ಸದಸ್ಯರನ್ನು ಆಯ್ಕೆ ಮಾಡುವಾಗ ರಾಜಕೀಯೇತರ ಉತ್ತಮ ಜ್ಞಾನಿಗಳನ್ನು ಆಯ್ಕೆ ಮಾಡಬೇಕು ಅದಕ್ಕಾಗಿ ಶೀಘ್ರದಲ್ಲಿ ಸಮಿತಿಯೊಂದನ್ನು ರಚಿಸಿ ಅದರ ಮೂಲಕ ಆಯ್ಕೆಮಾಡಲು ನಿರ್ಧರಿಸಲಾಗಿದೆ.

ರಾಜ್ಯದಲ್ಲಿ ಶಿಕ್ಷಣಕ್ಕಾಗಿ ಪ್ರಾಥಮಿಕ, ಪ್ರೌಢ ಹಾಗೂ ಪದವೀಧರ ಕಾಲೇಜುಗಳಲ್ಲಿ ಇರುವ ಅವಶ್ಯವಿರುವ ಮೂಲಭೂತ ಸೌಕರ್ಯ ಅಭಿವೃದ್ಧಿಗಾಗಿ 1000 ಕೋಟಿ ಬಿಡುಗಡೆ ಮಾಡಲು ತೀರ್ಮಾನಿಸಲಾಗಿದೆ. ಸಮಾಜದಲ್ಲಿ ಎಲ್ಲರಿಗು ಗುಣಮಟ್ಟದ ಶಿಕ್ಷಣ ದೊರಕಲು ಅಗತ್ಯವಿರುವ ಸಲಹೆಗಳನ್ನು ಸರ್ಕಾರಕ್ಕೆ ಶಿಕ್ಷಣ ಕ್ಷೇತ್ರದ ಪರಿಣಿತರು ಮುಕ್ತವಾಗಿ ನೀಡಲು ಮನವಿ ಮಾಡಿದ ಮುಖ್ಯಮಂತ್ರಿಗಳು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ತಮ್ಮ ಸರ್ಕಾರ ನೀಡಲಿದೆ ಎಂದು ಹೇಳಿದರು.

ಇದೇ ಸಮಯದಲ್ಲಿ ಶಿಕ್ಷಕರ ದಿನಾಚರಣೆಯ ಶುಭಾಶಯ ಕೋರಿದ ಅವರು ಶಿಕ್ಷಣ ಕ್ಷೇತ್ರದಲ್ಲಿ ಸಾಧನೆಗೈದವರನ್ನು ಮತ್ತು ನಾಡಿಗೆ ಕೊಡುಗೆ ನೀಡಿದವರನ್ನು ಸ್ಮರಿಸಿದರು.

ವಿಭಜನೆಗೊಂಡಿರುವ ಬೆಂಗಳೂರು ವಿಶ್ವವಿದ್ಯಾನಿಲಯದ ಕೇಂದ್ರ ವಿಶ್ವವಿದ್ಯಾನಿಲಯದ ಅಭಿವೃದ್ಧಿಗೆ ಕುಲಪತಿ ಪ್ರೊ. ಎಸ್. ಜಾಫೆಟ್ ಅವರು ಮುಖ್ಯಮಂತ್ರಿಗಳಿಗೆ ವಿಶೇಷ ಅನುದಾನ ಬಿಡುಗಡೆ ಮಾಡಲು ಮನವಿ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಉನ್ನತ ಶಿಕ್ಷಣ ಸಚಿವ ಜಿ.ಟಿ. ದೇವೇಗೌಡ, ಮಹಾಪೌರರಾದ ಸಂಪತ್‌ಕುಮಾರ್, ಶಾಸಕ ಆರ್. ರೋಷನ್‌ಬೇಗ್, ಉನ್ನತ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ: ಎನ್. ನಾಗಾಂಬಿಕ ದೇವಿ ಉಪಸ್ಥಿತರಿದ್ದರು.

ಸಂಖ್ಯೆ: 953/1053

## ಶಿಕ್ಷಕರಿಂದ ಯುವ ಪೀಳಿಗೆಯ ವಿಕಸನ ಸಾಧ್ಯ – ಇಂದ್ರಜಿತ್ ಘೋಷಾಲ್

ಬೆಂಗೂರು, ಸೆ 5 (ಕರ್ನಾಟಕ ವಾರ್ತೆ)

ಯುವ ಪೀಳಿಗೆಯ ವ್ಯಕ್ತಿತ್ವ ವಿಕಸನಗೊಳಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ತರವಾದದ್ದು. ಇವರ ಪರಿಶ್ರಮದಿಂದ ಉತ್ತಮ ಪ್ರಜೆಗಳನ್ನು ರೂಪಿಸಲು ಸಾಧ್ಯ ಎಂದು ಕರ್ನಾಟಕ ಮತ್ತು ಗೋವಾ ಎನ್.ಸಿ.ಸಿ. ನಿರ್ದೇಶನಾಲಯದ ಜಂಟಿ ನಿರ್ದೇಶಕ ಇಂದ್ರಜಿತ್ ಘೋಷಾಲ್ ಅವರು ತಿಳಿಸಿದರು.

ಅವರು ಇಂದು ನಗರದ ಶಿಕ್ಷಕರ ಸದನದಲ್ಲಿ ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಉತ್ತರ ಜಿಲ್ಲೆ ಹಾಗೂ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಸಂಘಗಳ ಸಹಯೋಗದಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮ ದಿನಾಚರಣೆ ಅಂಗವಾಗಿ ಹಮ್ಮಿಕೊಳ್ಳಲಾದ ಶಿಕ್ಷಕರ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ಮಾತನಾಡಿದರು.

ಒಂದು ಮಗುವನ್ನು ತಿದ್ದಿ ತೀಡಿ ಶಿಕ್ಷಕ ಮೌಲ್ಯಗಳನ್ನು ಕಲಿಸಬೇಕು. ಇಂದಿನ ಶಾಲೆಗಳ ಪಠ್ಯದಲ್ಲಿ ಮಾನವೀಯ ಮೌಲ್ಯಗಳು ಮರೆಯಾಗಿವೆ. ಇದನ್ನು ಮೊದಲು ಮಕ್ಕಳಿಗೆ ಕಲಿಸಬೇಕು. ಮಕ್ಕಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಶಾಲೆಗಳು ಶ್ರಮಿಸಬೇಕೆಂದರು.

ಕಾರ್ಯಕ್ರಮದಲ್ಲಿ 2018-19 ನೇ ಸಾಲಿನ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕರಿಗೆ ಪ್ರಶಸ್ತಿ ಪ್ರಧಾನ ಮಾಡಲಾಯಿತು. ಅಲ್ಲದೆ, 2017-18 ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಯಲ್ಲಿ ಉತ್ತಮ ಸಾಧನೆ ಮಾಡಿದ ಸರ್ಕಾರಿ, ಖಾಸಗಿ, ಅನುದಾನ ರಹಿತಿ, ಅನುದಾನಿತ ಶಾಲಾ ಮಕ್ಕಳನ್ನು ಸನ್ಮಾನಿಸಲಾಯಿತು. ಹಾಗೆಯೇ ಎಸ್.ಎಸ್.ಎಲ್.ಸಿ. ಯಲ್ಲಿ ಅಂಕಗಳಿಸಿದ ಪ್ರತಿಯೊಂದು ಸರ್ಕಾರಿ ಶಾಲೆಯ ತಲಾ ಇಬ್ಬರು ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸಹ ಈ ವರ್ಷದಿಂದ ಸನ್ಮಾನಿಸಲಾಗುವುದು.

ಕಾರ್ಯಕ್ರಮದಲ್ಲಿ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ಶಿಕ್ಷಕರು, ಎಸ್.ಎಸ್.ಎಲ್.ಸಿ ಯಲ್ಲಿ ಉತ್ತಮ ಅಂಕಗಳಿಸಿದ ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರು, ಕ್ಷೇತ್ರ ಶಿಕ್ಷಣಾದಿಕಾರಿಗಳು ಹಾಗೂ ವಿವಿಧ ಶಾಲಾ ಶಿಕ್ಷಕರು ಉಪಸ್ಥಿತರಿದ್ದರು.

**ಸಂಖ್ಯೆ: 954/1054**

## ಸರ್ಕಾರಿ ಶಾಲಾ ಕಾಲೇಜುಗಳ ಮೂಲಸೌಕರ್ಯ ಅಭಿವೃದ್ಧಿಗೆ ಒಂದು ಸಾವಿರ ಕೋಟಿ ರೂ – ಮುಖ್ಯಮಂತ್ರಿ

ಬೆಂಗಳೂರು, ಸೆ 5 (ಕರ್ನಾಟಕ ವಾರ್ತೆ)

ರಾಜ್ಯದ ಸರ್ಕಾರಿ ಶಾಲಾ ಕಾಲೇಜುಗಳ ಮೂಲಸೌಕರ್ಯ ಅಭಿವೃದ್ಧಿಗೆ ಒಂದು ಸಾವಿರ ಕೋಟಿ ರೂಗಳನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ತಿಳಿಸಿದರು.

ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ನಗರ ಜಿಲ್ಲಾಡಳಿತ, ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಇಂದು ಏರ್ಪಡಿಸಿದ್ದ ಭಾರತರತ್ನ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮ ದಿನಾಚರಣೆ ಅಂಗವಾಗಿ ರಾಜ್ಯಮಟ್ಟದ "ಶಿಕ್ಷಕರ ದಿನಾಚರಣೆ" ಹಾಗೂ ರಾಜ್ಯ ಪ್ರಶಸ್ತಿ ಪುರಸ್ಕೃತ ಶಿಕ್ಷಕರಿಗೆ ಪ್ರಶಸ್ತಿ ಪ್ರಧಾನ ಮಾಡಿ ಮಾತನಾಡಿದ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ಮುಂದಿನ 6 ತಿಂಗಳ ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಿಗೆ ಪೂರ್ಣ ಪ್ರಮಾಣದ ಮೂಲ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಕ್ರಮ ಕೈಗೊಂಡಿದೆ ಎಂದರು.

ಶಿಕ್ಷಣ ಕ್ಷೇತ್ರದಲ್ಲಿ ಕೆಲವು ಬದಾಲವಣೆ ತರುವ ಮೂಲಕ ಸರ್ಕಾರ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಲಿದೆ. ಇದಕ್ಕೆ ಸಂಬಂಧಿಸಿದಂತೆ ಶಿಕ್ಷಕರಿಗೆ ವಾರದಲ್ಲಿ 2 ದಿನ ವಿಶೇಷ ತರಬೇತಿಯನ್ನು ನೀಡಲು ಸರ್ಕಾರ ಚಿಂತನೆ ನಡೆಸಿದ್ದು ಶಿಕ್ಷಕರಾದ ತಾವುಗಳು ಇದಕ್ಕೆ ಸ್ಪಂದಿಸಬೇಕು ಎಂದು ಮನವಿ ಮಾಡಿದರು.

ಸರ್ಕಾರಿ ಶಾಲಾ-ಕಾಲೇಜುಗಳ ಗುಣಮಟ್ಟ ಹೆಚ್ಚಾಗಬೇಕು, ಖಾಸಗಿ ಶಾಲೆಗಳ ಹಂತಕ್ಕೆ ನಮ್ಮ ಶಾಲೆಗಳು ಬೆಳೆಯಬೇಕು ಎಂದು ತಿಳಿಸಿದ ಮುಖ್ಯಮಂತ್ರಿ ಅವರು ವಿದ್ಯಾರ್ಥಿಗಳು ಶಿಕ್ಷಕರನ್ನು ಹೆಚ್ಚು ಅನುಕರಣೆ ಮಾಡುತ್ತಾರೆ. ಆದ್ದರಿಂದ ಶಿಕ್ಷಕರು ಗುರುತರವಾದ ಜವಾಬ್ದಾರಿ ಹೊಂದಿದ್ದಾರೆ. ತಮ್ಮ ಕರ್ತವ್ಯವನ್ನು ರೀತಿಯಲ್ಲಿ ನಿರ್ವಹಿಸಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶಿಯಾಗಬೇಕು ಎಂದು ಕರೆ ನೀಡಿದರು.

ಸರ್ಕಾರಿ ಶಾಲೆಗಳಲ್ಲಿ ಇಂಗ್ಲೀಷ್ ಕಲಿಕೆಯನ್ನು ಒಂದು ವಿಷಯವನ್ನಾಗಿ ಕಲಿಸಲು ಸರ್ಕಾರ ಚಿಂತನೆ ನಡೆಸಿದ್ದು ಇದಕ್ಕೆ ಸಂಬಂಧಿಸಿದಂತೆ 1,000 ಇಂಗ್ಲೀಷ್ ಶಿಕ್ಷಕರ ನೇಮಕಕ್ಕೂ ಕ್ರಮ ಕೈಗೊಳ್ಳಲಾಗಿದೆ ಎಂದರು.

ಶಿಕ್ಷಕರ ಸಮಸ್ಯೆ ಹಾಗೂ ಬೇಡಿಕೆ ಈಡೇರಿಸಲು ನನಗೆ ಸ್ವಲ್ಪ ಕಾಲಾವಕಾಶ ಬೇಕಾಗಿದೆ. ನಿಮ್ಮ ಸಮಸ್ಯೆಗೆ ಪರಿಹಾರ ನೀಡುತ್ತೇನೆ ಎಂದು ತಿಳಿಸಿದ ಮುಖ್ಯಮಂತ್ರಿ ಅವರು ಅರೆಕಾಲಿಕ ಶಿಕ್ಷಕರು, ಅತಿಥಿ ಉಪನ್ಯಾಸಕರ ಸಮಸ್ಯೆಗಳನ್ನು ಸಹ ಹಂತ ಹಂತವಾಗಿ ಬಗೆಹರಿಸುದಾಗಿ ತಿಳಿಸಿದರು.

ಮೂರು ತಿಂಗಳಲ್ಲಿ ನಮ್ಮ ಸರ್ಕಾರ ಶೇ 32 ಕ್ಕೂ ಹೆಚ್ಚು ಆರ್ಥಿಕ ಪ್ರಗತಿ ಸಾಧಿಸಿದೆ. ಶಿಕ್ಷಣ ಕ್ಷೇತ್ರ ಅಭಿವೃದ್ಧಿಗೆ ಆರ್ಥಿಕ ಸಮಸ್ಯೆ ಇಲ್ಲ ಎಂದು ತಿಳಿಸಿದ ಅವರು ಶಿಕ್ಷಕರನ್ನು ಅತ್ಯಂತ ಗೌರವದಿಂದ ಕಾಣುತ್ತೇನೆ ಎಂದರು.

ಶಿಕ್ಷಣ ನಮ್ಮ ದೇಶದಲ್ಲಿ ಈ ಹಿಂದೆ ಸಾರ್ವಜನಿಕವಾಗಿ ಇರಲಿಲ್ಲ. ಕೆಲವರಿಗೆ ಮಾತ್ರ ಸೀಮಿತವಾಗಿತ್ತು ಎಂದು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಎನ್. ಮಹೇಶ್ ಅವರು ಸಮಾಜದಲ್ಲಿ ಮೇಲ್ವರ್ಗದವರಿಗೆ ಮಾತ್ರ ಸೀಮಿತವಾಗಿದ್ದ ಶಿಕ್ಷಣ ವ್ಯವಸ್ಥೆಯನ್ನು ಸಾರ್ವತ್ರಿಕಗೊಳಿಸಿದವರು ಆಂಗ್ಲರು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಶಿಕ್ಷಕರು ಸ್ಥಳೀಯ ಭಾಷೆ ಬಳಸುವುದರಿಂದ ಶಿಕ್ಷಕ ಮತ್ತು ವಿದ್ಯಾರ್ಥಿಗಳಲ್ಲಿ ಉತ್ತಮ ಸಂಬಂಧ ಏರ್ಪಡುತ್ತದೆ ಎಂದು ತಿಳಿಸಿದ ಶಿಕ್ಷಣ ಸಚಿವರು 1848 ರಲ್ಲೇ ಶಾಲೆ ತೆರೆಯುವ ಮೂಲಕ ಹೆಣ್ಣು ಮಕ್ಕಳಿಗೆ ಮತ್ತು ಕೆಳವರ್ಗದವರಿಗೆ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹಿಸಿದವರು ಮಹಾತ್ಮ ಜ್ಯೋತಿ ಬಾಪುಲೆ ಹಾಗೂ ಅವರ ಪತ್ನಿ ಸಾವಿತ್ರಿ ಬಾಪುಲೆ ಎಂದು ಅವರನ್ನು ಈ ಸಂದರ್ಭದಲ್ಲಿ ಸ್ಮರಿಸಿದರು.

ಶಿಕ್ಷಕರು ಮಕ್ಕಳ ಮನಸ್ಸಿನಲ್ಲಿ ಸಕಾರತ್ಮಾಕ ಅಂಶ ಬೆಳೆಸಿದರೆ ಆ ಮಗು ಸಕಾರತ್ಮಾಕವಾಗಿಯೇ ಬೆಳೆಯುತ್ತದೆ. ಆ ನಿಟ್ಟಿನಲ್ಲಿ ಶಿಕ್ಷಕರು ತಮ್ಮ ಕರ್ತವ್ಯ ನಿರ್ವಹಿಸಬೇಕು, ವಿದ್ಯಾರ್ಥಿಗಳು ಪ್ರಯೋಗಾಲಯ ಇದ್ದಂತೆ, ಇಲ್ಲಿ ಶಿಕ್ಷಕರು ವಿಜ್ಞಾನಿಗಳು. ಪ್ರಯೋಗಾಲಯದಲ್ಲಿ ಉತ್ತಮ ನಾಗರೀಕರನ್ನು ರೂಪಿಸಬೇಕು ಎಂದು ಅವರು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ರಾಜ್ಯ ಮಟ್ಟದಲ್ಲಿ ಆಯ್ಕೆಯಾದ ಉತ್ತಮ ಶಿಕ್ಷಕರನ್ನು ಸನ್ಮಾನಿಸಲಾಯಿತು.

ಸ್ಥಳೀಯ ಶಾಸಕರಾದ ಆರ್. ರೋಷನ್ ಬೇಗ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ವಿಧಾನ ಪರಿಷತ್ ಸದಸ್ಯರಾದ ಪುಟ್ಟಣ್ಣ ಮತ್ತು ದೇವೇಗೌಡ, ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಅಧ್ಯಕ್ಷ ಸಿ. ಮುನಿರಾಜು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಶಾಲಿನಿ ರಜನೀಶ್, ಶಿಕ್ಷಣ ಇಲಾಖೆಯ ಆಯುಕ್ತರಾದ ಡಾ. ಜಾಫರ್, ಪದವಿಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕರಾದ ಶಿಖಾ ಅವರು ಸೇರಿದಂತೆ ಚುನಾಯಿತ ಪ್ರತಿನಿಧಿಗಳು, ಶಿಕ್ಷಕರ ಸಂಘದ ಪದಾಧಿಕಾರಿಗಳು ಹಾಗೂ ರಾಜ್ಯಾದ್ಯಂತ ಆಗಮಿಸಿದ ಶಿಕ್ಷಕ ವೃಂದದವರು ಪಾಲ್ಗೊಂಡಿದ್ದರು.

**ಸಂಖ್ಯೆ: 955/1055**

## ಸಚಿವ ಸಂಪುಟ ಸಭೆ ಸಮಯದಲ್ಲಿ ಬದಲಾವಣೆ

ಬೆಂಗೂರು, ಸೆ 5 (ಕರ್ನಾಟಕ ವಾರ್ತೆ)

2018 ನೇ ಸಾಲಿನ ಸೆಪ್ಟೆಂಬರ್ 6 ರಂದು ಮಧ್ಯಾಹ್ನ 12.00 ಗಂಟೆಗೆ ಕರೆಯಲಾಗಿದ್ದ ಸಚಿವ ಸಂಪುಟದ ಸಭೆಯನ್ನು ಮುಂದೂಡಿ ಅಂದೇ ಮಧ್ಯಾಹ್ನ 4.00 ಗಂಟೆಗೆ ವಿಧಾನಸೌಧ ಮೂರನೇ ಮಹಡಿಯಲ್ಲಿರುವ ಸಚಿವ ಸಂಪುಟ ಸಭಾಮಂದಿರದಲ್ಲಿ ಕರೆಲಾಗಿದೆ ಎಂದು ಕರ್ನಾಟಕ ಸರ್ಕಾರ ಸಚಿವಾಲಯದ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 956/1056**

## "ಕೋಳಿ ಸಾಕಾಣಿಕೆ ತರಬೇತಿ"

ಬೆಂಗೂರು, ಸೆ 5 (ಕರ್ನಾಟಕ ವಾರ್ತೆ)

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ, ರಾಜ್ಯ ಕುಕ್ಕುಟ ಕ್ಷೇತ್ರ, ಹೆಸರಘಟ್ಟ, ಬೆಂಗಳೂರು – 560 089 ಸಂಸ್ಥೆಯ ವತಿಯಿಂದ ಈ ಕೆಳಕಂಡ ವಿವರದಂತೆ ಒಂದು ದಿನ " ಕೋಳಿ ಸಾಕಾಣಿಕೆ ತರಬೇತಿ" ಯನ್ನು ಹಮ್ಮಿಕೊಳ್ಳಲಾಗಿದೆ. ಆಸಕ್ತರು ಈ ತರಬೇತಿಯಲ್ಲಿ ಭಾಗವಹಿಸಬಹುದಾಗಿದೆ.

ತರಬೇತಿಯನ್ನು ಉಚಿತವಾಗಿ ನೀಡಲಾಗುವುದು. ಊಟ ಮತ್ತು ಉಪಹಾರದ ವ್ಯವಸ್ಥೆ ಇರುವುದಿಲ್ಲ ಹಾಗೂ ತರಬೇತಿಯಲ್ಲಿ ಭಾಗವಹಿಸುವವರಿಗೆ ಯಾವುದೇ ಭತ್ಯೆ ನೀಡುವುದಿಲ್ಲ.

ತರಬೇತಿಯಲ್ಲಿ ಭಾಗವಹಿಸಲು ಆಸಕ್ತಿಯುಳ್ಳವರು "ahvstrg.22.org" ವೆಬ್‌ಸೈಟ್ ನಲ್ಲಿ ಆನ್‌ಲೈನ್ ನೊಂದಣಿ ಮಾಡಿಕೊಳ್ಳಬಹುದು.

ಲಭ್ಯವಿರುವ ಮೂಲಭೂತ ಸೌಕರ್ಯಗಳನ್ನು ಆಧರಿಸಿ ಪ್ರಸ್ತುತ ತರಬೇತಿಯ ನೊಂದಣಿಯನ್ನು 75 ಜನರಿಗೆ ಮಾತ್ರ ಸೀಮಿತಗೊಳಿಸಿದ್ದು, ಮೊದಲು ನೋಂದಾಯಿಸಿದವರಿಗೆ ಆಧ್ಯತೆ ನೀಡಲಾಗುವುದು. ತರಬೇತಿಯಲ್ಲಿ ಪಾಲ್ಗೊಳ್ಳಲಿರುವವರು ನೋಂದಾವಣೆಯ ಸಮಯದಲ್ಲಿ ಆಧಾರ್ ಕಾರ್ಡ್‌ನ ಒಂದು ಪ್ರತಿ ಮತ್ತು ಇತ್ತೀಚಿನ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳನ್ನು ನೀಡತಕ್ಕದ್ದು.

ತರಬೇತಿಯು ಸೆಪ್ಟೆಂಬರ್ 15, 22 ಹಾಗೂ 29 ರಂದು ನಡೆಯಲಿದೆ. ತರಬೇತಿಯು ವಿದ್ಯಾರ್ಥಿ ನಿಲಯ, ರಾಜ್ಯ ಕುಕ್ಕುಟ ಕ್ಷೇತ್ರ, ಹೆಸರಘಟ್ಟ, ಬೆಂಗಳೂರು – 560 089 ( II HR ನಿಂದ ಸುಮಾರು 1 ಕಿ.ಮಿ. ದೂರದಲ್ಲಿ) ಮೀನುಗಾರಿಕೆ ಸಂಸ್ಥೆಯ ಎದುರು, ತರಬೇತಿಯು ಬೆಳಿಗ್ಗೆ 9.00 ರಿಂದ 5.00 ಗಂಟೆಯವರೆಗೆ ನಡೆಯಲಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 957/1057**

## ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಫಲಿತಾಂಶ ಪ್ರಕಟ

ಬೆಂಗೂರು, ಸೆ 5 (ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ಇವರ ವತಿಯಿಂದ ಜುಲೈ –2018 ರಲ್ಲಿ ನಡೆದ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಫಲಿತಾಂಶವನ್ನು ದಿನಾಂಕ: 07–09–2018 ರಂದು ಮಂಡಳಿಯ ವೆಬ್‌ಸೈಟ್ www.kseeb.kar.nic.in ನಲ್ಲಿ ರಾಜ್ಯಾದಾದ್ಯಂತ ಪ್ರಕಟಿಸಲಾಗಿದ್ದು ವಿದ್ಯಾರ್ಥಿಗಳು ಇದರ ಪ್ರಯೋಜನವನ್ನು ಪಡೆದುಕೊಳ್ಳಲು ಸೂಚಿಸಿದೆ.

ಸಂಬಂದಿಸಿದ ಶಾಲೆಗಳಿಗೆ ಈಗಾಗಲೇ ಫಲಿತಾಂಶ ಪಟ್ಟಿಯನ್ನು ತ್ವರಿತ ಅಂಚೆ ಮೂಲಕ ಕಳುಹಿಸಲಾಗಿದ್ದು, ತಲುಪಿದ ತಕ್ಷಣವೇ ಆಯಾ ಗಣಕಯಂತ್ರ ಶಿಕ್ಷಣ ಸಂಸ್ಥೆಗಳ ಪ್ರಕಟಣಾ ಫಲಕದಲ್ಲಿ ಪ್ರಕಟಿಸಲು ಸೂಚಿಸಲಾಗಿದೆ ಎಂದು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 958/1058**

## JUDICIAL GESTURE : HIGH COURT JUDGES CONTRIBUTE RS. 10,000 EACH TO KARNATAKA AND KERALA CHIEF MINISTER'S CALAMITY RELIEF FUND

Bengaluru, September 5 (Karnataka Information) :

All the judges of High Court of Karnataka have contributed Rs. 10,000 each to Karnataka and Kerala Chief Minister's Calamity Relief Fund.

Further, all the judges of District judiciary of Karnataka have given a letter to Chief Secretary to deduct one day salary and be made over Karnataka Chief Minister's Calamity Relief Fund 2018.

So also, Karnataka State Judicial officer's Co-operative Society has agreed to contribute Rs Five Lakh to the same fund, according to Mr V Srishananda, Registrar ( Judicial ) High Court of Karnataka.

**ಸಂಖ್ಯೆ: 959/1059**

# ಎಸಿಬಿ ದಾಳಿ

**ಬೆಂಗಳೂರು, ಸೆಪ್ಟೆಂಬರ್ 5, (ಕರ್ನಾಟಕ ವಾರ್ತೆ) :**

ಕೊಪ್ಪಳ ತಾಲ್ಲೂಕು ಕೊಡದಾಳ ಗ್ರಾಮದ ನಿವಾಸಿಯಾದ ಫಿರ್ಯಾದುದಾರರು 2017–18 ನೇ ಸಾಲಿನ ಬಸವ ವಸತಿ ಯೋಜನೆ ಆಡಿಯಲ್ಲಿ ಮಂಜೂರಾಗಿರುವ ಮನೆ ನಿರ್ಮಾಣದ ವರ್ಕ್ ಆರ್ಡರ್ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಶ್ರೀಮತಿ.ಮಂಜುಳ ಪಾಟೀಲ್, ಪಿ.ಡಿ.ಓ, ಇರಕಲ್‌ಗಡ ಗ್ರಾಮ ಪಂಚಾಯತಿ, ಕೊಪ್ಪಳ ತಾಲೂಕು ಇವರು ಅರ್ಜಿದಾರರ ಮನೆ ನಿರ್ಮಾಣಕ್ಕಾಗಿ ವರ್ಕ್ ಆರ್ಡರ್ ನೀಡಲು ರೂ.8,000/– ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:04.09.2018 ರಂದು ಶ್ರೀಮತಿ.ಮಂಜುಳ ಪಾಟೀಲ್ ಪಿ.ಡಿ.ಓ, ಇರಕಲ್‌ಗಡ ಗ್ರಾಮ ಪಂಚಾಯತಿ ರವರು ಫಿರ್ಯಾದುದಾರರಿಂದ ರೂ.8,000/– ಗಳ ಲಂಚದ ಹಣವನ್ನು ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ಕೊಪ್ಪಳ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು

ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿ ಬಿದ್ದಿರುತ್ತಾರೆ. ಇವರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 960/1060**

# ACB Raid

Bengaluru, September 5 (Karnataka Information)

A resident of Kodadhal village, Koppal Taluk had sought for issuing work order for construction of house under Basava Vasathi scheme 2017-18. Smt.Manjula Patil, P.D.O, Irakalgada Grama Panchayath had demanded bribe amount of **₹ 8,000/-** to do the same.

On 04.09.2018. the officials of Anti Corruption Bureau PS Koppal have trapped and arrested Smt.Manjula Patil, P.D.O, Irakalgada Grama Panchayath while accepting the bribe amount of **₹ 8,000**/- from the complainant. The bribe amount has been seized. The case is under investigation says official press release.

**ಸಂಖ್ಯೆ: 961/1061**

# ಎಸಿಬಿ ದಾಳಿ

**ಬೆಂಗಳೂರು,, ಸೆಪ್ಟೆಂಬರ್ 5, (ಕರ್ನಾಟಕ ವಾರ್ತೆ) :**

ದಿನಾಂಕ:04–09–2018 ರಂದು ರಾಯಚೂರು ಭ್ರಷ್ಟಾಚಾರ ನಿಗ್ರಹ ದಳವು ಶ್ರೀ.ಕೆ.ಶಂಕರ ನಾಯಕ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಜಿಲ್ಲಾ ಪಂಚಾಯತ್ ಇಂಜನೀಯರಿಂಗ್

ಇಲಾಖೆ, ರಾಯಚೂರು ಉಪ ವಿಭಾಗ, ರಾಯಚೂರು ರವರು ತಮ್ಮ ಬಲ್ಲ ಮೂಲಗಳಿಂದ ಅಸಮತೋಲನ ಆಸ್ತಿಪಾಸ್ತಿಗಳನ್ನು ಹೊಂದಿರುವ ಬಗ್ಗೆ ವಿಶ್ವಾಸಾರ್ಹ ಮಾಹಿತಿ ಸಂಗ್ರಹಿಸಿ, ಅಕ್ರಮ ಆಸ್ತಿಗಳಿಕೆ ಪ್ರಕರಣವನ್ನು ದಾಖಲಿಸಿ, ಅವರಿಗೆ ಸಂಬಂಧಿಸಿದ ಅವರ ಕುಟುಂಬದವರು ವಾಸವಿರುವ ಮನೆಯಾದ ರಾಯಚೂರು ನಗರದ ಕೆ.ಹೆಚ್.ಬಿ.ಕಾಲೋನಿ ಹಾಗೂ ಇವರು ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿ ಮೇಲೆ ದಾಳಿ ನಡೆಸಲಾಗಿರುತ್ತದೆ. ಈವರೆಗೆ ಶೋಧನೆ ನಡೆಸಲಾದ ಸ್ಥಳಗಳಲ್ಲಿ ತನಿಖೆಯಿಂದ ಪತ್ತೆಯಾದ ಆರೋಪಿತ ಸರ್ಕಾರಿ ನೌಕರನ ಚರ ಮತ್ತು ಸ್ಥಿರ ಆಸ್ತಿಗಳ ವಿವರ ಈ ಕೆಳಕಂಡಂತಿರುತ್ತವೆ. ತನಿಖೆ ಮುಂದುವರೆದಿದೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 962/1062**

# ಎಸಿಬಿ ದಾಳಿ

**ಬೆಂಗಳೂರು,, ಸೆಪ್ಟೆಂಬರ್ 5, (ಕರ್ನಾಟಕ ವಾರ್ತೆ) :**

**ರಾಯಚೂರು ನಗರದ ಕೆ.ಹೆಚ್.ಬಿ.ಕಾಲೋನಿಯಲ್ಲಿ ಎರಡು ಅಂತಸ್ತಿನ ಮನೆ ಮತ್ತು ಒಂದು ನಿವೇಶನ, ಬಳ್ಳಾರಿ ಜಿಲ್ಲೆ ಹರಪನಹಳ್ಳಿ ತಾಲೂಕಿನ ಮಾಡಲಗೇರಿ ಗ್ರಾಮದಲ್ಲಿ 10 ಎಕರೆ 15 ಗುಂಟೆ ಕೃಷಿ ಜಮೀನು, ಚಿನ್ನ 503 ಗ್ರಾಂ, ಬೆಳ್ಳಿ 280 ಗ್ರಾಂ, ಒಂದು ಕಾರು, ಎರಡು ದ್ವಿಚಕ್ರ ವಾಹನ, ಆರೋಪಿತರ ಮತ್ತು ಕುಟುಂಬ ಸದಸ್ಯರುಗಳ ಹೆಸರುಗಳ ಬ್ಯಾಂಕ್ ಖಾತೆಗಳಲ್ಲಿ ರೂ.7 ಲಕ್ಷ ಮತ್ತು ರೂ.30.30 ಲಕ್ಷ ಗೃಹೋಪಯೋಗಿ ವಸ್ತುಗಳು ಕಂಡುಬಂದಿರುತ್ತದೆ.**

ತನಿಖೆ ಮುಂದುವರೆದಿದ್ದು, ಆರೋಪಿತ ಸರ್ಕಾರಿ ನೌಕರನು ಹೊಂದಿರುವ ಆಸ್ತಿ–ಪಾಸ್ತಿಗಳ ಮೂಲದ ಬಗ್ಗೆ ತನಿಖೆ ಹಾಗೂ ದಾಖಲೆಗಳ ಪರಿಶೀಲನಾ ಕಾರ್ಯ ಹಾಗೂ ಸಂಬಂಧಪಟ್ಟ ಇನ್ನು ಹೆಚ್ಚಿನ ಸ್ಥಳಗಳ ಮಾಹಿತಿ ಸಂಗ್ರಹಣೆ ಮುಂದುವರೆದಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 963/1063**

# ACB Raid

Bengaluru, September 5 (Karnataka Information)

On 04.09.2018 Raichur ACB had conducted raids over the properties of Shri.K.Shankar Naik, Asst.Executive Engineer, Panchayat Raj Engineering Department Raichur Sub Divn, Raichur who is believed to have amassed disproportionate assets beyond his known sources of income. Raids were conducted at Two places connected to this official 1) his place of residence at K.H.B.Colony, Raichur and 2) his Office at Raichur. Details of the properties identified during the raids are as follows.

**2 floor Building and One Plot at K.H.B.Colony Raichur, 10 Acres 15 Gunta Land at Bellary District, Harapanahalli Taluk Madalageri Village, Gold 503 gms, Silver 280 gms, 1 Cars, 2 Two wheeler, Bank Balance ₹ 7 Lakhs and ₹ 30.30 lakhs worth household items were found.**

Investigation is continued and efforts are being put to find out the Source of Income and other possible places for the Search says official press release.